**ಸಾಕ್ಷಿಯನ್ನು ದಿನಾಂಕ 13-07-2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಪಿರ್ಯಾಧಿದಾರರ ಸ್ವ ಪ್ರಮಾಣೀಕೃತ ಹೇಳಿಕೆಃ-**

ನಾನು ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದರಲ್ಲಿ ಬರೆದ ವಿಷಯಗಳು ಸತ್ಯವಾಗಿದೆ. ಅದನ್ನು ನನ್ನ ಪ್ರಮಾಣೀಕೃತ ಹೇಳಿಕೆಯನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸುತ್ತೇನೆ.

ಸಾಕ್ಷಿಯು ಮೂಲ ಚೆಕ್ ಅನ್ನು ನೋಡಿ ಅದರಲ್ಲಿರುವ ಸಹಿ ಆರೋಪಿಯ ಸಹಿ ಎಂದು ಗುರುತಿಸಿದ್ದು ಮೂಲ ಚೆಕ್ ಅನ್ನು ನಿ.ಪಿ.-1 ಎಂದು ಮತ್ತು ಆರೋಪಿಯ ಸಹಿಯನ್ನು ನಿ.ಪಿ.-1(ಎ) ಎಂದು ಗುರುತಿಸಲಾಯಿತು. ಬ್ಯಾಂಕ್ ಸ್ಲಿಪ್ ನಿ.ಪಿ.-2 ಎಂದು, ಬ್ಯಾಂಕ್ ಹಿಂಬರವನ್ನು ನಿ.ಪಿ.-3 ಎಂದು, ಪಿರ್ಯಾದಿಯು ವಕೀಲರ ಮೂಲಕ ಆರೋಪಿಗೆ ಕಳುಹಿಸಿರುವ ನೋಟೀಸ್ ನ ಕಛೇರಿಯ ಪ್ರತಿಯನ್ನು ನಿ.ಪಿ.-4 ಎಂದು, ಅಂಚೆ ರಶೀದಿಯನ್ನು ನಿ.ಪಿ.-5 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿ ವಿರುದ್ಧ ಕಾನೂನು ರೀತ್ಯ ಸೂಕ್ತ ಕ್ರಮ ಜರುಗಿಸಬೇಕೆಂದು ಪ್ರಾರ್ಥಿಸುತ್ತೇನೆ.

ಮರು ವಿಚಾರಣೆಃ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.)

(ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಹೊಸನಗರ.